## ಸೆಕ್ಷನ್ 4(1) (ಬಿ) (iii) ರ ಪ್ರಕಾರ ಅಧಿಕಾರಿಗಳು ಮತ್ತು ನೌಕರರು ಮತ್ತು ಅವರಿಗೆ ವಹಿಸಲಾಗಿರುವ ಅಧಿಕಾರಿಗಳು, ಕರ್ತವ್ಯಗಳು ಮತ್ತು ತೀರ್ಮಾನ ಕೈಗೊಳ್ಳುವಲ್ಲಿ ಅವರು ಅನಸರಿಸುವ ಕಾರ್ಯವಿಧಾನ

ಮೇಲೆ ತಿಳಿಸಿರುವ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಜಿಲ್ಲಾ ಪಂಚಾಯತ್ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈ ಕಛೇರಿಯಲ್ಲಿ ನಿರ್ವಹಿಸುವ ಎಲ್ಲಾ ವಿಭಾಗಗಳ ವಿಷಯಗಳ ಬಗ್ಗೆ ಗ್ರಾಮ ಪಂಚಾಯ್ತಿ ಕಾರ್ಯದರ್ಶಿಗಳ ಶಿಸ್ತು ಪ್ರಕರಣಗಳ ಹೊರತುಪಡಿಸಿ, ಅಂತಿಮ ತೀರ್ಮಾನ ಕೈಗೊಳ್ಳುವ ಪ್ರಾಧಿಕಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿರುತ್ತಾರೆ. ಸಾರ್ವಜನಿಕರಿಂದ, ಅಧೀನ ಕಛೇರಿಯಿಂದ ಮತ್ತು ಮೇಲಾಧಿಕಾರಿಗಳಿಂದ ಹಾಗೂ ಸರ್ಕಾರಗಳಿಂದ ಬರುವಂತಹ ಎಲ್ಲಾ ಕಾಗದಪತ್ರಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ಸ್ವೀಕರಿಸಿ, ಉಪ ಕಾರ್ಯದರ್ಶಿ(ಆಡಳಿತ) ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಿರು ಸಹಿ ಮಾಡಿಸಿದ ನಂತರ ಸ್ವೀಕೃತಿ ಶಾಖೆಗೆ ಸಂಬಂಧಿಸಿದ ರಿಜಿಸ್ಟರ್‌ಗಳಲ್ಲಿ ನಮೂದಿಸಿ, ಸಂಬಂಧಪಟ್ಟ ವಿಷಯನಿರ್ವಾಹಕರಿಗೆ ಸ್ವೀಕೃತಿ ಪಡೆದು ನೀಡಲಾಗುವುದು. ಸಾರ್ವಜನಿಕರ ಮನವಿ ಬಗ್ಗೆ ಸ್ವೀಕೃತಿ ಪತ್ರವನ್ನು ನೀಡಲಾಗುತ್ತದೆ.

ಕಛೇರಿ ಕೈಪಿಡಿ ನಿಯಮಾವಳಿ ರೀತಿ ಜನಪ್ರತಿನಿಧಿಗಳ ಹಾಗೂ ತುರ್ತು ಕಾಗದ ಪತ್ರಗಳನ್ನು ಆದ್ಯತೆ ಮೇರೆಗೆ ಕಛೇರಿ ಟಿಪ್ಪಣಿಯನ್ನು ವಿಷಯನಿರ್ವಾಹಕರು ಮಂಡಿಸುತ್ತಾರೆ. ಸ್ವೀಕರಿಸಿದ ಎಲ್ಲಾ ಕಾಗದ ಪತ್ರಗಳನ್ನು ವಿಷಯನಿರ್ವಾಹಕರು ದಿನಚರಿಯಲ್ಲಿ ನಮೂದಿಸಿಕೊಂಡು ತದನಂತರ ವಿಷಯವಹಿಯಲ್ಲಿ ಆದ್ಯತೆ ಮೇರೆಗೆ ನೊಂದಾಯಿಸಿ ಸಂಬಂಧಪಟ್ಟ ಕಡತಗಳಲ್ಲಿ ಟಿಪ್ಪಣಿ ಹಾಕಿ ಮಂಡಿಸುತ್ತಾರೆ. ವಿಷಯ ನಿರ್ವಾಹಕರೆಲ್ಲರೂ ಕಛೇರಿ ಕಾರ್ಯವಿಧಾನದ ರೀತಿಯ ಐದು ಕಂತೆ ವಿಧಾನ ಅಳವಡಿಸಿ ಕಾರ್ಯನಿರ್ವಹಿಸುತ್ತಾರೆ. ವಿಷಯನಿರ್ವಾಹಕರಿಂದ ಬಂದಂತಹ ಎಲ್ಲಾ ಕಡತಗಳ ಪರಿಶೀಲನೆ ಮಾಡಿ ವ್ಯವಸ್ಥಾಪಕರು, ಲೆಕ್ಕಾಧೀಕ್ಷಕರುಗಳು ಮತ್ತು ಸಹಾಯಕ ಕಾರ್ಯದರ್ಶಿಗಳು, ಲೆಕ್ಕಾಧಿಕಾರಿಗಳು ವಿಳಂಬವಾಗದ ರೀತಿ ಕಡತದಲ್ಲಿ ವಿಷಯಗಳ ತೀರ್ಮಾನ ಕೈಗೊಳ್ಳುವ ನಿಟ್ಟಿನಲ್ಲಿ ಸೂಕ್ತ ಅಭಿಪ್ರಾಯದೊಂದಿಗೆ ಸಲ್ಲಿಸುತ್ತಾರೆ. ನಂತರ ಉಪ ಕಾರ್ಯದರ್ಶಿಗಳು

–5)



(ಆಡಳಿತ),ಉಪ ಕಾರ್ಯದರ್ಶಿಗಳು(ಅಭಿವೃದ್ಧಿ),ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಯೋಜನಾಧಿಕಾರಿ ಗಳು, ಯೋಜನಾ ನಿರ್ದೇಶಕರು ಬಂದಂತಹ ಕಡತಗಳನ್ನು ಪರಿಶೀಲಿಸಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ವಿಲೇವಾರಿ ಮಾಡುತ್ತಾರೆ. ಮುಖ್ಯ ವಿಷಯಗಳಲ್ಲಿ ಅಂತಿಮ ತೀರ್ಮಾನ, ಮಂಜೂರಾತಿ ಪ್ರಕರಣಗಳು, ಸರ್ಕಾರಕ್ಕೆ ಹಾಗೂ ಮೇಲಾಧಿಕಾರಿಗಳ ಕಛೇರಿಗಳಿಗೆ ಸಲ್ಲಿಸುವ ಪ್ರಕರಣಗಳನ್ನು ಅಂತಿಮ ತೀರ್ಮಾನಕ್ಕಾಗಿ ಟಿಪ್ಪಣಿಯಲ್ಲಿ ಶಿಫಾರಸ್ಸು ಮಾಡಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸುತ್ತಾರೆ. ಕಡತಗಳಲ್ಲಿ ತೀರ್ಮಾನ ಕೈಗೊಳ್ಳುವ ಬಗ್ಗೆ ಅನುಸರಿಸುವ ಕಾರ್ಯವಿಧಾನ ಕಛೇರಿ ಕೈಪಿಡಿಯ ನಿಯಮಾವಳಿಯ ರೀತಿಯ ಕ್ರಮ ವಹಿಸಲಾಗುತ್ತದೆ.